ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 19/11/2019

# ಜನರಂತೆ ಜನನಾಯಕರು

19/11



ಮಲ್ಲೇಶ್ವರದಲ್ಲಿರುವ ಶ್ರೀ ಅಖಿಲ ಹವ್ಯಕ ಮಹಾಸಭೆಯಲ್ಲಿ ನಡೆದ 'ಸಾಧನಾ ಸಂಕಲ್ಪ' ಸಮಾರಂಭದಲ್ಲಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರನ್ನು ಅಭಿನಂದಿಸಲಾಯಿತು. ಹವ್ಯಕ ಮಹಾಸಭೆಯ ಅಧ್ಯಕ್ಷ ಡಾ.ಗಿರಿಧರ್ ಕಜೆ, ಲೆಫ್ಟಿನೆಂಟ್ ಜನರಲ್ ಡಾ. ಬಿ.ಎನ್.ಬಿ.ಎಂ. ಪ್ರಸಾದ್, ಉಪಾಧ್ಯಕ್ಷ ಶ್ರೀಧರ ಭಟ್ ಕೆಕ್ಕಾರು, ಪ್ರಧಾನ ಕಾರ್ಯದರ್ಶಿ ವೇಣುವಿಘ್ನೇಶ್ ಸಂಪ ಸೇರಿದಂತೆ ಹಲವರಿದ್ದರು.

- ಸಾಧನೆ ಮಾಡಲು ಸಂಕಲ್ಪ ಅವಶ್ಯ
- ನಾಡಿಗೆ ಒಳಿತು ಮಾಡುವ ಸಾಮರ್ಥ್ಯವಿದೆ

ಸಂ.ಕ.ಸಮಾಚಾರ ಬೆಂಗಳೂರು

ಜನರು ಹೇಗಿರುತ್ತಾರೆಯೋ ಅದೇ ರೀತಿಯ ಜನಪ್ರತಿನಿಧಿಗಳು ಆಯ್ಕೆಯಾಗುತ್ತಿದ್ದಾರೆಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅಭಿಪ್ರಾಯಪಟ್ಟರು.

ಮಲ್ಲೇಶ್ವರದಲ್ಲಿರುವ ಶ್ರೀ ಅಖಿಲ ಹವ್ಯಕ ಮಹಾಸಭೆಯಲ್ಲಿ ನಡೆದ 'ಸಾಧನಾ ಸಂಕಲ್ಪ' ಮತ್ತು 'ಅಭಿನಂದನಾ' ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರಸ್ತುತ ಜನನಾಯಕರ ಕುರಿತು ಹೆಚ್ಚೆಚ್ಚು ಚರ್ಚೆಗಳು ನಡೆಯುತ್ತಿವೆ. ಆದರೆ, ಅದಕ್ಕೂ ಮೊದಲು ಅವರನ್ನು ಆಯ್ಕೆ ಮಾಡುತ್ತಿರುವ ಜನರು ಹೇಗಿದ್ದಾರೆ ಎನ್ನುವುದು ಮುಖ್ಯ ಎಂದು ಹೇಳಿದರು.

ಡಾ.ಗಿರಿಧರ್ ಕಜೆ ಅವರ ನೇತೃತ್ವದಲ್ಲಿ ಹವ್ಯಕ ಮಹಾಸಭೆ ಬಹಳ ಉತ್ತಮ ಕಾರ್ಯಗಳನ್ನು ಮಾಡುತ್ತಿದೆ. ಆಡಳಿತ ಮಂಡಳಿಯ ಕಾರ್ಯಗಳಿಂದ ಸಮಾಜಕ್ಕೆ ಒಳಿತಾಗುತ್ತಿದೆ. ತಮ್ಮ ಕಾರ್ಯವ್ಯಾಪ್ತಿಯಲ್ಲಿ ಉತ್ತಮ ಕಾರ್ಯಗಳನ್ನು ಮಾಡಲು ಸಲಹೆಗಳನ್ನು ಕೋರಿದರು.

ಲೆಫ್ಟಿನೆಂಟ್ ಜನರಲ್ ಡಾ. ಬಿ.ಎನ್.ಬಿ.ಎಂ. ಪ್ರಸಾದ್ ಮಾತನಾಡಿ, ಸಾಧನೆ ಮಾಡಲು ಸಂಕಲ್ಪ ಬೇಕು, ಜೊತೆಜೊತೆಗೆ ಉತ್ತಮ ಉದ್ದೇಶ ಹಾಗೂ ದೈವದ ಆಶೀರ್ವಾದ ಬೇಕು. ನಮ್ಮಲ್ಲಿ ಸಾಧನೆ ಮಾಡಲು ಬೇಕಾದ ಶಕ್ತಿ ನಮ್ಮ ಪೂರ್ವಜರ ಬಳುವಳಿಯಾಗಿ ಬಂದಿದೆ. ಹವ್ಯಕರಲ್ಲಿ ನಾಡಿಗೆ ಒಳಿತು ಮಾಡುವ ಸಾಮರ್ಥ್ಯ ಇದೆ. ಅದನ್ನು ನಾವು ಸದುಪಯೋಗಪಡಿಸಿಕೊಳ್ಳೋಣ ಎಂದರು. ಹವ್ಯಕ ಮಹಾಸಭೆಯ ಅಧ್ಯಕ್ಷ ಡಾ. ಗಿರಿಧರ ಕಜೆ ಮಾತನಾಡಿ, ಹವ್ಯಕರು ರಾಜಕೀಯದಲ್ಲಿ ಅನೇಕರಿದ್ದಾರೆ. ಆದರೆ ಮುಖ್ಯಮಂತ್ರಿಯಾದವರು ರಾಮಕೃಷ್ಣ ಹೆಗಡೆಯವರು ಮಾತ್ರ, ಅದೇ ರೀತಿ ಸಾಂವಿಧಾನಿಕ ಹುದ್ದೆಯಾದ ವಿಧಾನಸಭೆಯ ಅಧ್ಯಕ್ಷ ಸ್ಥಾನವನ್ನು ಅಲಂಕರಿಸಿದ ಏಕೈಕ ವ್ಯಕ್ತಿ ವಿಶ್ವೇಶ್ವರ ಹೆಗಡೆ ಕಾಗೇರಿಯವರು. ಸರಳ ಸಜ್ಜನಿಕೆಯ ಕಾಗೇರಿಯವರಿಂದ ನಾಡಿಗೆ ಮಾದರಿಯಾಗುವ ಕಾರ್ಯಗಳಾಗಲಿ ಎಂದು ಆಶಿಸಿದರು. ಮಹಾಸಭೆಯ ಕಾರ್ಯಗಳನ್ನು ವಿಸ್ತರಿಸಲು 25 ವಿವಿಧ ಹವ್ಯಕ ವೇದಿಕೆಗಳಿಗೆ ಚಾಲನೆ ನೀಡಲಾಗಿದೆ. ಇದು ಮಹಾಸಭೆಯ ಅಂಗ ಸಂಸ್ಥೆಯಾಗಿ ಕಾರ್ಯನಿರ್ವಹಿಸಲಿದ್ದು, ಮಹಾಸಭೆಯ ಕಾರ್ಯವ್ಯಾಪ್ತಿಯನ್ನು ವಿಸ್ತರಿಸಿ, ಸಮಾಜಮುಖಿ ಕಾರ್ಯಗಳಿಗೆ ಇನ್ನೊಂದು ಆಯಾಮ ಕೊಡಲಿದೆ ಎಂದರು.

ಉಪಾಧ್ಯಕ್ಷ ಶ್ರೀಧರ ಭಟ್ ಕೆಕ್ಕಾರು, ಪ್ರಧಾನ ಕಾರ್ಯದರ್ಶಿ ವೇಣುವಿಘ್ನೇಶ್ ಸಂಪ, ಎಸ್.ಆರ್.ಹೆಗಡೆ ರಾಘೋಣ, ಕಾರ್ಯದರ್ಶಿಗಳಾದ ಪ್ರಶಾಂತ ಭಟ್ ಯಲ್ಲಾಪುರ, ಸಾಲೆಕೊಪ್ಪ ಶ್ರೀಧರ ಭಟ್, ಯು.ಎಸ್.ಹೆಗಡೆ, ಕೋಶಾಧಿಕಾರಿ ಕೃಷ್ಣಮೂರ್ತಿ ಭಟ್ ಮತ್ತಿತರರಿದ್ದರು.